# Bangalore
# Regional News
# 08.04.2026 / 18.40 hrs
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

1. ವಿಧಾನಸಭಾ ಉಪಚುನಾವಣೆ ; ನಾಳಿನ ಮತದಾನಕ್ಕೆ ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ಕ್ಷೇತ್ರಗಳು ಸಜ್ಜು
2. ಮಹಿಳೆಯರ ಶೈಕ್ಷಣಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ರಾಜ್ಯ ಸರ್ಕಾರ ಬದ್ಧ ; ಸಚಿವ ಎನ್.ಚಲುವರಾಯಸ್ವಾಮಿ
3. ನಾಳೆ ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶ ಪ್ರಕಟ; ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೂ ಫಲಿತಾಂಶ ಮಾಹಿತಿ ರವಾನೆ
4. ಮಾನವ ವನ್ಯಜೀವಿ ಸಂಘರ್ಷ ತಡೆಗೆ ಆಯ್ದ ಪ್ರಾಣಿಗಳ ಸಂತಾನಶಕ್ತಿಹರಣ ಚಿಕಿತ್ಸೆಗೆ ಸರ್ಕಾರದ ಚಿಂತನೆ
5. ಬೆಂಗಳೂರಿನಲ್ಲಿ ನಾಳೆಯಿಂದ ಎರಡು ದಿನ ಮೂರು ರಕ್ಷಣಾ ಸೇವೆಗಳ ವಿಶೇಷ ರಣ-ಸಂವಾದ ವಿಚಾರ ಸಂಕಿರಣ

***************

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳಿಗೆ ನಾಳೆ ಉಪಚುನಾವಣೆ ನಡೆಯಲಿದೆ. ಮಾಜಿ ಶಾಸಕ ಮೇಟಿ ಹುಲ್ಲಪ್ಪ, ಯಮನಪ್ಪ ಅವರ ನಿಧನದಿಂದಾಗಿ ತೆರವಾದ ಸ್ಥಾನಕ್ಕೆ ಬಾಗಲಕೋಟೆಯಲ್ಲಿ ಹಾಗೂ ಮಾಜಿ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾದ ಸ್ಥಾನಕ್ಕೆ ನಾಳೆ ಉಪಚುನಾವಣೆ ನಡೆಯಲಿದೆ.

ಬಾಗಲಕೋಟೆಯಲ್ಲಿ 1 ಲಕ್ಷದ 26 ಸಾವಿರದ 761 ಪುರುಷ, 1 ಲಕ್ಷದ 32 ಸಾವಿರದ 476 ಮಹಿಳೆ ಹಾಗೂ 23 ತೃತೀಯ ಲಿಂಗಿ ಸೇರಿದಂತೆ ಒಟ್ಟು 2 ಲಕ್ಷದ 59 ಸಾವಿರದ 260 ಮತದಾರರಿದ್ದಾರೆ.

ಇನ್ನು ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ 1 ಲಕ್ಷದ 13 ಸಾವಿರದ 654 ಪುರುಷ, 1 ಲಕ್ಷದ 17 ಸಾವಿರದ 986 ಮಹಿಳಾ ಮತ್ತು 43 ತೃತೀಯ ಲಿಂಗಿ ಮತದಾರರು ಸೇರಿದಂತೆ ಒಟ್ಟು 2 ಲಕ್ಷದ 31 ಸಾವಿರದ 683 ಮತದಾರರಿದ್ದಾರೆ.

ಉಭಯ ಜಿಲ್ಲಾಡಳಿತಗಳು ನಾಳಿನ ಮತದಾನಕ್ಕಾಗಿ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿವೆ. ದಾವಣಗೆರೆಯಲ್ಲಿ ಮತದಾನಕ್ಕಾಗಿ 284 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ನಗರ ವ್ಯಾಪ್ತಿಯಲ್ಲಿ 234 ಮತ್ತು ಗ್ರಾಮೀಣ ವ್ಯಾಪ್ತಿಯಲ್ಲಿ 50 ಮತಗಟ್ಟೆಗಳು ಸೇರಿವೆ. 76 ಮತಗಟ್ಟೆಗಳನ್ನು ಅತಿ ಸೂಕ್ಷ್ಮ ಎಂದು ಗುರುತಿಸಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ.

ಉಪಚುನಾವಣೆಗೆ ಒಟ್ಟು 322 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಪ್ರತಿಯೊಂದು ಮತಗಟ್ಟೆಗೆ ಪ್ರಿಸೈಡಿಂಗ್ ಅಧಿಕಾರಿ ಸೇರಿದಂತೆ ಸಿಬ್ಬಂದಿ ನೇಮಕ ಮಾಡಲಾಗಿದೆ. ಎಲ್ಲಾ ಮತಗಟ್ಟೆಗಳಲ್ಲಿ ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಲಾಗಿದೆ

ಪ್ರತಿ ಮತಗಟ್ಟೆಯಲ್ಲಿ ಕಾಯ್ದಿರಿಸಿದ ಕೊಠಡಿ, ಕುಡಿಯುವ ನೀರು, ರ್‍ಯಾಂಪ್ ವ್ಯವಸ್ಥೆ, ಶೌಚಾಲಯ, ನೆರಳು ಮತ್ತು ಕ್ಯೂ ಮ್ಯಾನೇಜ್‌ಮೆಂಟ್ ಫೀಡಿಂಗ್ ಕೊಠಡಿ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ.

***************

ಮಹಿಳೆರಯ ಸಮಗ್ರ ಅಭಿವೃದ್ಧಿಗಾಗಿ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಗ್ಯಾರಂಟಿ ಯೋಜನೆಗಳ ಮೂಲಕ 1 ಲಕ್ಷದ 30 ಸಾವಿರ ಕೋಟಿ ರೂಪಾಯಿಗಳಿಗೂ ಅಧಿಕ ಅನುದಾನ ನೀಡಲಾಗಿದೆ ಎಂದು ಕೃಷಿ ಹಾಗೂ ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯದಲ್ಲಿ ನಡೆದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ-2026 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ದೇಶದ ಸಬಲೀಕರಣಕ್ಕೆ ಮಹಿಳೆಯರ ಶಿಕ್ಷಣ ಅತಿ ಮುಖ್ಯ ಎಂದಿದ್ದಾರೆ.

ಇದೇ ವೇಳೆ ಸಚಿವರು ಜಿಲ್ಲೆಯಲ್ಲಿ ಮಹಿಳಾ ಉತ್ಪನ್ನಗಳ ಮಾರಾಟಕ್ಕಾಗಿ ಪ್ರತ್ಯೇಕ ಮಾರುಕಟ್ಟೆ ಸ್ಥಾಪಿಸುವ ಭರವಸೆ ನೀಡಿದರು.

ಬಳಿಕ ಮಾತನಾಡಿದ ಶಾಸಕ ಪಿ.ರವಿಕುಮಾರ್ ಮಹಿಳೆಯರು ಅಭಿವೃದ್ಧಿ ಹೊಂದಿದಾಗ ಮಾತ್ರ ದೇಶ ಅಭಿವೃಯಾಗುವ ಸಾಧ್ಯ ಎಂಬುದು ಮಹಾತ್ಮಾಗಾಂಧೀಜಿಯವರ ಪರಿಕಲ್ಪನೆಯಾಗಿತ್ತು ಎಂದು ಸ್ಮರಿಸಿದರು.

***************

ದ್ವಿತೀಯ ಪಿಯುಸಿ ಪರೀಕ್ಷೆ-1ರ ಫಲಿತಾಂಶವನ್ನು ನಾಳೆ ಮಧ್ಯಾಹ್ನ 3 ಗಂಟೆಗೆ 2026ರ ಪ್ರಕಟಿಸಲಾಗುವುದು. ಫಲಿತಾಂಶವನ್ನು karresults.nic.in ಮೂಲಕ ಅಥವಾ ಕರ್ನಾಟಕ ಒನ್ ಮೊಬೈಲ್ ಆ್ಯಪ್ ಮೂಲಕವೂ ತಿಳಿದುಕೊಳ್ಳಬಹುದಾಗಿದೆ ಎಂದು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ತಿಳಿಸಿದೆ.

ಮಂಡಳಿ ವತಿಯಿಂದ ವಿದ್ಯಾರ್ಥಿಗಳ ನೋಂದಾಯಿತ ಮೊಬೈಲ್ ಸಂಖ್ಯೆಗೆ ವಾಟ್ಸ್‌ಪ್ ಅಥವಾ ಎಸ್‌ಎಂಎಸ್ ಮೂಲಕವೂ ಫಲಿತಾಂಶದ ಮಾಹಿತಿ ರವಾನಿಸಲಾಗುತ್ತದೆ. ಈ ವರ್ಷ ಮೊದಲ ಬಾರಿಗೆ ವಿಶೇಷವಾಗಿ ವಿದ್ಯಾರ್ಥಿಗಳ ಅಂಕಪಟ್ಟಿಯನ್ನು ಡಿಜಿ ಲಾಕರ್ ಮೂಲಕ ಅದೇ ದಿನ ಮಧ್ಯಾಹ್ನ 3 ಗಂಟೆಗೆ ಲಭ್ಯಗೊಳಿಸಲಾಗುವುದು ಎಂದು ಮಂಡಳಿ ಮಾಹಿತಿ ನೀಡಿದೆ.

***************

ಮಾನವ-ವನ್ಯಜೀವಿ ಸಂಘರ್ಷ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಪ್ರಾಣಿಗಳ ಸಂಖ್ಯೆ ನಿಯಂತ್ರಿಸಲು ಆಯ್ದ ವನ್ಯಜೀವಿಗಳ ಸಂತಾನ ಶಕ್ತಿಹರಣ ಮಾಡುವ ಕುರಿತು ಚಿಂತನೆ ನಡೆಸಲಾಗುತ್ತಿದೆ ಎಂದು ಅರಣ್ಯ ಸಚಿವ ಈಶ್ವರ್ ಖಂಡ್ರೆ ತಿಳಿಸಿದ್ದಾರೆ.

ಈ ಬಗ್ಗೆ ಸಾರ್ವಜನಿಕ ಚರ್ಚೆ ಹಾಗೂ ಕಾನೂನು ತಜ್ಞರೊಂದಿಗೆ ಸಮಾಲೋಚನೆ ನಡೆಸಿ ಸರ್ವೋಚ್ಚನ್ಯಾಯಾಲಯಕ್ಕೆ ಪ್ರಸ್ತಾವನೆ ಸಲ್ಲಿಸುವ ಬಗ್ಗೆಯೂ ಹಿರಿಯ ಅಧಿಕಾರಿಗಳೊಂದಿಗೆ ಸಭೆ ನಡೆಸುವ ಚಿಂತನೆ ಇದೆ ಎಂದು ತಿಳಿಸಿದರು.

ಇದೇ ವೇಳೆ ಕಾಡಿನಿಂದ ಸ್ವಯಂ ಪ್ರೇರಣೆಯಿಂದ ಹೊರಬರಲು ಇಚ್ಛಿಸುವ ಅರಣ್ಯ ವಾಸಿಗಳ ಸ್ಥಳಾಂತರಕ್ಕೆ ಸರ್ಕಾರ ಸಿದ್ಧವಿದ್ದು, ಇದಕ್ಕಾಗಿ ಪಟ್ಟಿ ಸಿದ್ಧಪಡಿಸಲು ಸೂಚಿಸಲಾಗಿದೆ.

ಇಂದು ಕಾಫಿ ಬೆಳೆಗಾರರೊಬ್ಬರು ಕಾಡಾನೆ ದಾಳಿಗೆ ಬಲಿಯಾದ ಘಟನೆಗೆ ತೀವ್ರ ಸಂತಾಪ ವ್ಯಕ್ತಪಡಿಸಿದ ಸಚಿವರು ಆನೆಗಳ ಸಮಸ್ಯೆ ಪರಿಹರಿಸಲು ಉದ್ದೇಶಿಸಲಾಗಿರುವ ಆನೆಧಾಮ ನಿರ್ಮಾಣಕ್ಕೆ ಎದುರಾಗಿರುವ ತಾಂತ್ರಿಕ ಅಡೆತಡೆಗಳನ್ನು ಶೀಘ್ರವೇ ನಿವಾರಿಸುವುದಾಗಿ ಭರವಸೆ ನೀಡಿದರು.

***************

ಬೆಂಗಳೂರಿನ ವಾಯುಪಡೆ ತರಬೇತಿ ಕೇಂದ್ರದಲ್ಲಿ ನಾಳೆ ಮತ್ತು ನಾಡಿದ್ದು, ರಣ-ಸಂವಾದ್ ಎಂಬ ವಿಶೇಷ ಮೂರು ರಕ್ಷಣಾ ಸೇವೆಗಳ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ.

ಬಹು ವಲಯ ಕಾರ್ಯಾಚರಣೆಗಳು; ಸಾಂಪ್ರದಾಯಿಕ ಮತ್ತು ಅನಿಯಮಿತ ಬೆದರಿಕೆಗಳನ್ನು ಎದುರಿಸಲು ಈಗಿನ ತುರ್ತು ಅಗತ್ಯ ಎಂಬ ವಿಷಯದ ಕುರಿತು ಈ ಬಾರಿ ಚರ್ಚೆಗಳು ಕೇಂದ್ರೀಕರಿಸಲಿವೆ.

ಭೂಮಿ, ವಾಯು, ಸಾಗರ ಮಾತ್ರವಲ್ಲದೇ ಸೈಬರ್, ಬಾಹ್ಯಾಕಾಶ ಮತ್ತು ಜ್ಞಾನಾರ್ಜನೆಯ ಕ್ಷೇತ್ರಗಳನ್ನು ಒಳಗೊಂಡ ಬಹುಕ್ಷೇತ್ರ ಸಂಘರ್ಷಕ್ಕೆ ಭಾರತದ ರಕ್ಷಣಾ ಪಡೆಗಳನ್ನು ಸಜ್ಜುಗೊಳಿಸಲು ಮಾರ್ಗಸೂಚಿಯನ್ನು ರೂಪಿಸುವ ಕುರಿತು ಈ ಎರಡು ದಿನಗಳ ವಿಚಾರ ಸಂಕಿರಣದಲ್ಲಿ ಚರ್ಚೆಗಳು ನಡೆಯಲಿವೆ.

ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್ ಅವರ ಪರಿಕಲ್ಪನೆಯಂತೆ ಆರಂಭವಾಗಿರುವ ಈ ಉಪಕ್ರಮ, ತಾಂತ್ರಿಕ ಪ್ರಗತಿಗೆ ಅನುಗುಣವಾಗಿ ಯುದ್ಧ ತಂತ್ರಗಳನ್ನು ರೂಪಿಸಲು ಸಹಕಾರಿಯಾಗಲಿದೆ.

***************

ಕಂದಾಯ ಇಲಾಖೆ ಅಧಿಕಾರಿಗಳು ತಮ್ಮ ಹಂತದಲ್ಲಿಯೇ ಜನರ ಸಮಸ್ಯೆಗಳನ್ನು ಬಗೆಹರಿಸಬೇಕು ಎಂದು ತುಮಕೂರು ಜಿಲ್ಲಾ ಉಸ್ತುವಾರಿ ಹಾಗೂ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸೂಚಿಸಿದ್ದಾರೆ.

ನಗರದ ಕೇಂದ್ರ ಗ್ರಂಥಾಲಯ ಆವರಣದಲ್ಲಿ ನಡೆದ ಜಿಲ್ಲಾ ಉಸ್ತುವಾರಿ ಸಚಿವರ ಜನತಾದರ್ಶನದಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಕಂದಾಯ ಇಲಾಖೆಯ ಬಗ್ಗೆ ಸಾಕಷ್ಟು ದೂರುಗಳು ಬಂದಿದ್ದು, ಹೈಕೋರ್ಟ್ ಆದೇಶವನ್ನು ಕಂದಾಯ ಅಧಿಕಾರಿಗಳು ಪಾಲಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಧಿಕಾರಿಗಳು ಜನರ ಸಮಸ್ಯೆಗಳಿಗೆ ಪರಿಹಾರವನ್ನು ಒದಗಿಸಬೇಕು, ತಹಶೀಲ್ದಾರ್ ಹಂತದಲ್ಲಿ ಬಗೆಹರಿಸಬಹುದಾದ ಸಮಸ್ಯೆಗಳೊಂದಿಗೆ ಜನರು ಜಿಲ್ಲಾ ಮಟ್ಟಕ್ಕೆ ಬಂದಿರುವುದು, ಕಂದಾಯ ಅಧಿಕಾರಿಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂಬುದಕ್ಕೆ ಪ್ರತಿಬಿಂಬ ಎಂದರು.

ಜನತಾದರ್ಶನದ ವೇಳೆ ವಿವಿಧ ಇಲಾಖೆಗಳ ಸೌಲಭ್ಯ ಪಡೆದವರಿಗೆ ಹಕ್ಕುಪತ್ರ ಹಾಗೂ ಆದೇಶ ಪತ್ರಗಳನ್ನು ವಿತರಿಸಲಾಯಿತು.

***************

ನಾರಿಶಕ್ತಿ ವಂದನಾ ಅಭಿಯಾನ ಕಾಯ್ದೆ ಮೂಲಕ ಮಹಾತ್ಮಾ ಗಾಂಧೀಜಿ, ಕನಸು ಸಾಕಾರವಾಗುತ್ತಿದೆ ಎಂದು ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಹೇಳಿದ್ದಾರೆ.

ಚಾಮರಾಜನಗರದಲ್ಲಿ ಆಕಾಶವಾಣಿಯೊಂದಿಗೆ ಮಾತನಾಡಿದ ಅವರು, ನಾರಿ ಶಕ್ತಿ ವಂದನಾ ಅಭಿಯಾನ ಕಾಯ್ದೆ ಐತಿಹಾಸಿಕ ಕಾಯ್ದೆಯಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರು ಮಹಿಳಾ ಸಬಲೀಕರಣಕ್ಕೆ ಈ ಕಾಯ್ದೆ ತರುತ್ತಿರುವುದು ಸ್ವಾಗತಾರ್ಹ. ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಮೀಸಲಾತಿ ಮಹಾತ್ಮ ಗಾಂಧೀಜಿಯವರ ಕನಸಾಗಿದ್ದು ಈಗ ಅದು ಸಾಕಾರಗೊಳ್ಳುತ್ತಿದೆ. ಇದು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕು ಎಂದರು.

ಧ್ವನಿ : ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್

***************

ಹುಲಿಗಾಗಿ ಇಟ್ಟಿದ್ದ ಬೋನಿಗೆ ಚಿರತೆ ಸೆರೆಯಾಗಿರುವ ಘಟನೆ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಪಡಗೂರು ಗ್ರಾಮದಲ್ಲಿ ನಡೆದಿದೆ.

ಪಡಗೂರು ಗ್ರಾಮದ ರೈತ ಮಹಾದೇವಸ್ವಾಮಿ ಎಂಬವರ ಜಮೀನಿನಲ್ಲಿ ಚಿರತೆ ಸೆರೆಯಾಗಿದ್ದು ಸೆರೆ ಸಿಕ್ಕ ಚಿರತೆ ಅಂದಾಜು 4 ವರ್ಷ ಪ್ರಾಯದ ಹೆಣ್ಣು ಚಿರತೆಯಾಗಿದೆ.

ಕಳೆದ ಹಲವು ದಿನಗಳಿಂದ ಪಡಗೂರು ಸುತ್ತಮುತ್ತಲು ಹುಲಿ ಓಡಾಟದ ಆತಂಕವನ್ನು ರೈತರು ಹೊರಹಾಕಿದ್ದರಿಂದ ತುಮಕೂರು ಮಾದರಿ ಬೋನಿಟ್ಟು ಕರುವೊಂದನ್ನು ಕಟ್ಟಲಾಗಿತ್ತು. ಆಹಾರ ಅರಸಿ ಬಂದ ಚಿರತೆ ಬೋನಿನಲ್ಲಿ ಸೆರೆಯಾಗಿದೆ.

ಸದ್ಯ, ಸೆರೆ ಸಿಕ್ಕ ಚಿರತೆಯನ್ನು ಸುರಕ್ಷಿತ ಪ್ರದೇಶಕ್ಕೆ ಅರಣ್ಯ ಇಲಾಖೆ ಸ್ಥಳಾಂತರಿಸಿದೆ.

*******ಮುಕ್ತಾಯ********